ಸರ್ಕಾರಿ ಆಸ್ಪತ್ರೆಯ ಬಗ್ಗೆ

1645(1752); ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಬಾಗಲಕೋಟೆ)

ಅ) ಬಾಗಲಕೋಟೆಯ ಸರ್ಕಾರಿ ಆಸ್ಪತ್ರೆಯಲ್ಲಿರುವ ಹಾಸಿಗೆಗಳ ಸಂಖ್ಯೆ ಎಷ್ಟು; ಮಂಜೂರಾಗಿರುವ ವೈದ್ಯರ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು);

ಆ) ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ಏನು ಕ್ರಮ ಕೈಗೊಳ್ಳಲಾಗಿದೆ; ಇದರ ನಿರ್ವಹಣೆಯನ್ನು ಯಾರು ನಿರ್ವಹಿಸುತ್ತಾರೆ;

ಈ) ಸರಿಯಾಗಿ ನಿರ್ವಹಿಸದೆ ಇದ್ದರೆ ಅವರ ವಿರುದ್ಧ ಏನು ಕ್ರಮಕೈಗೊಂಡಿರುವಿರಿ; ಇಲ್ಲಿಯವರೆಗೆ ಎಷ್ಟು ಪ್ರಕರಣಗಳಲ್ಲಿ ಕ್ರಮಕೈಗೊಳ್ಳಲಾಗಿರುತ್ತದೆ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಾಗಲಕೋಟೆಯಲ್ಲಿ 250 ಹಾಸಿಗೆಗಳ ಜಿಲ್ಲಾ ಆಸ್ಪತ್ರೆ ಇದ್ದು, ಇಲ್ಲಿ 27 ತಜ್ಞ ವೈದ್ಯ ಅಧಿಕಾರಿಗಳ ಹುದ್ದೆಗಳು ಮಂಜೂರಾಗಿವೆ ಹಾಗೂ ಸಾರ್ವಜನಿಕ ಆಸ್ಪತ್ರೆಯ ಹಳೇ ಬಾಗಲಕೋಟೆಯಲ್ಲಿ 50 ಹಾಸಿಗೆ ಸಾಮರ್ಥ್ಯ ಹೊಂದಿದೆ. ಇಲ್ಲಿ 3 ತಜ್ಞ ವೈದ್ಯ ಅಧಿಕಾರಿಗಳ ಹುದ್ದೆಗಳು ಮಂಜೂರಾಗಿವೆ.

ಆ) ಸದರಿ ಆಸ್ಪತ್ರೆಗಳಿಗೆ ಅಗತ್ಯತೆಗೆ ಅನುಗುಣವಾಗಿ ಬೇಕಾಗುವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ.

ಇ) ಉದ್ಭವಿಸುವುದಿಲ್ಲ

ಈ) ಸರಿಯಾಗಿ ನಿರ್ವಹಿಸದೆ ಇರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ.